## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 720

ವಿಧಾನಪರಿಷತ್ತಿನ ಸದಸ್ಯರ ಹೆಸರು : ಶ್ರೀ ಐವನ್ ಡಿ'ಸೋಜಾ (ವಿಧಾನಸಭಾ ಕ್ಷೇತ್ರ)

ಉತ್ತರಿಸಬೇಕಾದ ದಿನಾಂಕ : 10.03.2026

ಉತ್ತರಿಸುವ ಸಚಿವರು : ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು

*****

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಮಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ನಿರ್ಮಿಸಲಾದ ಮಾರುಕಟ್ಟೆ ಕಾಮಗಾರಿಗಳು ಯಾವ ಹಂತದಲ್ಲಿದೆ; ಇದಕ್ಕೆ ಬಿಡುಗಡೆ ಮಾಡಿದ ಅನುದಾನ ಎಷ್ಟು; ಬಾಕಿ ಇರುವ ಹಣ ಎಷ್ಟು; (ವಿವರ ನೀಡುವುದು) | ಮಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಬೈಕಂಪಾಡಿ ಮುಖ್ಯ ಮಾರುಕಟ್ಟೆ ಪ್ರಾಂಗಣ, ಹಣ್ಣು ಮತ್ತು ತರಕಾರಿ ಮಾರುಕಟ್ಟೆ ಪ್ರಾಂಗಣ ಹಾಗೂ ನೆಲ್ಲಿಕಾಯಿ ರಸ್ತೆಯಲ್ಲಿ ಮಾರುಕಟ್ಟೆ ಪ್ರಾಂಗಣಗಳಿದ್ದು, ಬೈಕಂಪಾಡಿ ಮುಖ್ಯ ಮಾರುಕಟ್ಟೆ ಪ್ರಾಂಗಣದಲ್ಲಿ ಕೈಗೊಳ್ಳಲಾದ ಕಾಮಗಾರಿಗಳನ್ನು 1998ರಲ್ಲಿ ಹಾಗೂ ಹಣ್ಣು ಮತ್ತು ತರಕಾರಿ ಮಾರುಕಟ್ಟೆ ಪ್ರಾಂಗಣದಲ್ಲಿ ಕೈಗೊಳ್ಳಲಾದ ಕಾಮಗಾರಿಗಳನ್ನು 2025ರಲ್ಲಿ ಸಮಿತಿಯ ಸ್ವಂತ ನಿಧಿಯಿಂದ ಕೈಗೊಂಡು ಪೂರ್ಣಗೊಳಿಸ ಲಾಗಿರುತ್ತದೆ.<br><br>ನೆಲ್ಲಿಕಾಯಿ ರಸ್ತೆಯಲ್ಲಿರುವ 1.45 ಎಕರ ಜಾಗದಲ್ಲಿ ರೂ.38.53 ಕೋಟಿ ಮೊತ್ತದಲ್ಲಿ ಅತ್ಯಾಧುನಿಕ ಕೃಷಿ ಸಂಕೀರ್ಣವನ್ನು ಸಮಿತಿಯ ಸ್ವಂತ ನಿಧಿಯಿಂದ ನಿರ್ಮಿಸಲು ಟೆಂಡರ್ ಆಹ್ವಾನಿಸಲಾಗಿದ್ದು, ಟೆಂಡರ್ ಪ್ರಕ್ರಿಯೆ ಪ್ರಗತಿಯಲ್ಲಿರುತ್ತದೆ ಹಾಗೂ ಸದರಿ ಕಾಮಗಾರಿಗಳಿಗೆ ಸರ್ಕಾರದಿಂದ ಯಾವುದೇ ಅನುದಾನ ಬಿಡುಗಡೆಯಾಗಿರುವುದಿಲ್ಲ. |
| ಆ) | ನಗರಪಾಲಿಕೆ ವ್ಯಾಪ್ತಿಯಲ್ಲಿ ಮಾರುಕಟ್ಟೆಗಳಿಗೆ ವಿನಿಯೋಗಿಸಿರುವ ಹಣವು ಯಾವುದೇ ಇಲ್ಲದೆ ಸರ್ಕಾರದ ಹಣ ಪೋಲು ಮಾಡುತ್ತಿದ್ದು, ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು; | ಅಂತಹ ಯಾವುದೇ ಪ್ರಕರಣಗಳು ಇರುವುದಿಲ್ಲ. |
| ಇ) | ಮಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ 06 ಮಾರುಕಟ್ಟೆಗಳ ಸ್ಥಳಾವಕಾಶವನ್ನು ಗ್ರಾಹಕರಿಗೆ ವಹಿಸಿಕೊಡದೆ ಕಾಮಗಾರಿಗಳನ್ನು ನಿಲ್ಲಿಸಿ ಸಾರ್ವಜನಿಕರ ಹಣ ಪೋಲು ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? (ವಿವರ ನೀಡುವುದು) | |

ಸಿಇ 81 ಎಂಆರ್‌ಇ 2026

(ಶಿವಾನಂದ ಎಸ್. ಪಾಟೀಲ)
ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ
ಹಾಗೂ ಕೃಷಿ ಮಾರುಕಟ್ಟೆ ಸಚಿವರು